# ಬೆಳಗಾವಿಯಲ್ಲಿ ಅಧಿವೇಶನ ನಡೆಸಿ

**ಬೆಂಗಳೂರು:** ನವೆಂಬರ್ ಅಂತ್ಯ ಅಥವಾ ಡಿಸೆಂಬರ್ ಮೊದಲ ವಾರದಲ್ಲಿ ವಿಧಾನ ಮಂಡಲದ



ಚಳಿಗಾಲದ ಅಧಿವೇಶನವನ್ನು ಬೆಳಗಾವಿಯಲ್ಲಿ ನಡೆಸಲು ಸಿಎಂ ಬಸವರಾಜ ಬೊಮ್ಮಾಯಿ ಅವರಿಗೆ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಮನವಿ ಮಾಡಿದ್ದಾರೆ.

ಈ ಸಂಬಂಧ ಸಿಎಂಗೆ ಪತ್ರ ಬರೆದಿರುವ ಅವರು, ಈ ಬಾರಿಯ ವಿಧಾನ ಮಂಡಲದ ಚಳಿಗಾಲದ ಅಧಿವೇಶನವನ್ನು ಬೆಳಗಾವಿಯ ಸುವರ್ಣಸೌಧದಲ್ಲಿ ನಡೆಸುವ ಕುರಿತು ಈಗಾಗಲೇ ಚರ್ಚಿಸಲಾಗಿದ್ದು, ತಾವೂ ಇದಕ್ಕೆ ಒಪ್ಪಿದ್ದೀರಿ ಎಂಬುದನ್ನು ನೆನಪು ಮಾಡಿಕೊಟ್ಟಿದ್ದಾರೆ.

ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ವಿಧಾನ ಪರಿಷತ್ತಿಗೆ ಆಯ್ಕೆಯಾಗಿರುವ 25 ಜನ ಸದಸ್ಯರು 2022 ರ ಜ.5ರಂದು ನಿವೃತ್ತಿ ಹೊಂದಲಿದ್ದಾರೆ.

ಈ ಹಿನ್ನೆಲೆಯಲ್ಲಿ ಈ ಬಾರಿಯ ಚಳಿಗಾಲದ ಅಧಿವೇಶನವನ್ನು ನವೆಂಬರ್ ತಿಂಗಳಾಂತ್ಯದಲ್ಲಿ ಅಥವಾ ಡಿಸೆಂಬರ್ ಮೊದಲ ವಾರದಲ್ಲಿ ಬೆಳಗಾವಿಯಲ್ಲಿ ನಡೆಸುವಂತೆ ಸಭಾಪತಿ ಪತ್ರ ಮುಖೇನ ಒತ್ತಾಯಿಸಿದ್ದಾರೆ.

Hosadigantha 01.11.2021